# ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ : 2015-16ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ ಪುನರ್‌ವಿನಿಯೋಗದ ಮೂಲಕ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :
1. ಕಾರ್ಯನಿರ್ವಾಹಕ ನಿದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ ಇವರ ಪತ್ರದ ಸಂಖ್ಯೆ ಮಗಾಇ/ಆಯವ್ಯಯ/105/2014-15/1836, ದಿನಾಂಕ 17.03.2016.
2. ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ/2/ಟಿಎಫ್‌ಪಿ/2010, ದಿನಾಂಕ 30.04.2010.

## ಪ್ರಸ್ತಾವನೆ :

2015-16ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ (MGIRED) ರೂ.202.00ಲಕ್ಷಗಳನ್ನು ಸಂಸ್ಥೆ ಆವರ್ತಕ ವೆಚ್ಚಗಳಿಗಾಗಿ ಒದಗಿಸಿದ್ದು, ಪ್ರಸ್ತುತ ವರ್ಷದ ವೆಚ್ಚಗಳಿಗೆ ಅನುದಾನದ ಕೊರತೆ ಕಂಡುಬಂದಿರುವುದರಿಂದ ಸಂಸ್ಥೆಯ ಮೂಲಭೂತ ತುರ್ತು ಅವಶ್ಯವಿರುವ ಸೌಕರ್ಯಗಳನ್ನು ಒದಗಿಸುವ ಸಲುವಾಗಿ ಹೆಚ್ಚುವರಿ ಅನುದಾವನ್ನು ಬಿಡುಗಡೆ ಮಾಡುವಂತೆ ಮೇಲೆ ಓದಲಾದ (1)ರಂತೆ ಕೋರಲಾಗಿದೆ.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರ ಕೋರಿಕೆಯನ್ವಯ 2015-16ನೇ ಸಾಲಿನ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ 2515-00-101-0-24(ಯೋಜನೆ)ಯಿಂದ ಪುನರ್‌ವಿನಿಯೋಗದ ಮೂಲಕ ರೂ.14.00ಲಕ್ಷಗಳನ್ನು ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ 2501-04-105-0-02-059(ಯೋಜನೆ)ಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/83/ಜೈಅಯೋ/2015 ಬೆಂಗಳೂರು, ದಿನಾಂಕ: 10.03.2016.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ 2015-16ನೇ ಸಾಲಿನಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರುರವರಿಗೆ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ 2515-00-101-0-24(ಯೋಜನೆ)ಯಿಂದ ಪುನರ್‌ವಿನಿಯೋಗ ಮಾಡಿ ರೂ.14.00ಲಕ್ಷಗಳನ್ನು ಸಂಸ್ಥೆಗೆ ಬಿಡುಗಡೆ ಮಾಡಿ ಆದೇಶಿಸಿದೆ.

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ 2501-04-105-0-02-059(ಯೋಜನೆ)ಯಡಿ ಭರಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆರವರು ಗ್ರಾಂಟ್-ಇನ್-ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಮೇಲು ರುಜು ಪಡೆದು, ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಿದ ಅನುದಾನವನ್ನು ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸುವುದು ಹಾಗೂ ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ/2/ಟಿಎಫ್‌ಪಿ/2010, ದಿನಾಂಕ: **30.04.2010ರಂತೆ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್** ಇಲಾಖೆ ರವರ ಪ್ರದತ್ತವಾದ ಅಧಿಕಾರದನ್ವಯ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ: ಗ್ರಾಅಪ 118 ಪಿಬಿಎಸ್ 2015 ದಿನಾಂಕ 10.03.2016ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳುರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
3. ಜಂಟಿ ನಿರ್ದೇಶಕರು ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ.
6. ಉಪ ನಿರ್ದೇಶಕರು (ತಾಂತ್ರಿಕ), ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
7. ಉಪ ನಿರ್ದೇಶಕರು, TNMC, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
8. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪ ಇಲಾಖೆ.
9. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.

ಪ್ರಪತ್ರ22 ಎ-KFC(ಅನುಚ್ಛೇದ 108)

ಆಯವ್ಯಯ ಪತ್ರದಲ್ಲಿ ಅಥವಾ ಹೆಚ್ಚಿನ ಹಣ ಹಂಚಿಕೆ(ಅಲಾಟ್ಮೆಟ್)ಗಳಲ್ಲಿ ಉಪಬಂಧ ಕಲ್ಪಿಸಿಲ್ಲದ ಎಲ್ಲಾ ವಿನಿಯೋಗಗಳಿಗೆ ಅಥವಾ ಮಂಜೂರಾತಿಗೆ ಲಗತ್ತಿಸಬೇಕಾದ ಮುನರ್ವಿನಿಯೋಗದ ವಿವರಣೆ.

ರೂ.ಲಕ್ಷಗಳಲ್ಲಿ

| ಕ್ರ.ಸಂ | Object Code | ಮುಂಗಡ ಪತ್ರದ ಪ್ರಧಾನ, ಚಿಕ್ಕ, ಉಪ ಮತ್ತು ವಿವರವಾದ ಶೀರ್ಷಿಕೆಗಳು | ಹೆಚ್ಚಿಸಲು ಪ್ರಸ್ತಾವಿಸಲಾದ ಅಂದಾಜಿನ ಶೀರ್ಷಿಕ | | | | ಕಡಿಮೆ ಮಾಡಲು ಪ್ರಸ್ತಾವಿಸಲಾದ ಅಂದಾಜಿನ ಶೀರ್ಷಿಕ | | | | ಷರಾ ಹಣ (ಅಲಾಟ್‌ಮೆಂಟ್) ಮೀರಿರುವುದಕ್ಕೆ ಮತ್ತು ಉಳಿತಾಯ ನಿರೀಕ್ಷಿಸುವುದಕ್ಕೆ ಕಾರಣಗಳನ್ನು ಇಲ್ಲಿ ಪೂರ್ಣವಾಗಿ ವಿವರಿಸಬೇಕು. |
|---|---|---|---|---|---|---|---|---|---|---|---|
| | | | ಮಂಜೂರಾದ ಆಯವ್ಯಯ ಅಂದಾಜಿನಲ್ಲಿರುವ ಮೊತ್ತ | ಈವರೆಗೆ ಆಗಿರುವ ವಾಸ್ತವಿಕ ವೆಚ್ಚ | ವರ್ಷದ ಉಳಿದ ಅವಧಿಯಲ್ಲಿ ಸಂಭವನೆಯ ವೆಚ್ಚ | ಬೇಕಾದ ಹೆಚ್ಚಿನ ಅಲಾಟ್‌ಮೆಟ್ ವಿವರ | ಮಂಜೂರಾದ ಆಯವ್ಯಯ ಅಂದಾಜಿನಲ್ಲಿರುವ ಮೊತ್ತ | ಈವರೆಗೆ ಆಗಿರುವ ವಾಸ್ತವಿಕ ವೆಚ್ಚ | ವರ್ಷದ ಉಳಿದ ಅವಧಿಯಲ್ಲಿ ಸಂಭವನೆಯ ವೆಚ್ಚ | ಮುನರ್ವಿನಿಯೋಗಕ್ಕೆ ಲಭ್ಯವಿರುವ ಮೊತ್ತ | |
| 1 | | 2501-04-105-0-02-059(ಯೋಜನೆ) | 202.00 | 220.64 | 50.64 | 14.00 | | | | | MGIRED ಸಂಸ್ಥೆಯ ಮೂಲಭೂತ ತುರ್ತು ಅವಶ್ಯವಿರುವ ಸೌಕರ್ಯಗಳನ್ನು ಒದಗಿಸುವ ಸಲುವಾಗಿ ರೂ.14.00ಲಕ್ಷಗಳನ್ನು ಮುನರ್ವಿನಿಯೋಗ ಮಾಡಲಾಗಿದೆ. |
| 2 | | 2515-00-101-0-24(Plan) | | | | | 125.00 | 101.99 | 8.58 | 14.43 | |

(ಎನ್.ಕೃಷ್ಣಪ್ಪ)

ನಿರ್ದೇಶಕರು (ಗ್ರಾಮೂಸ್-2) ಹಾಗೂ

ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.